**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2019–20 ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಅನುಷ್ಠಾನ ಸಂಬಂಧ ರಾಜ್ಯ ಮಟ್ಟದ ಉಪ ಸಮಿತಿ ರಚನೆ ಕುರಿತು.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂ:ಕೃಇ 34 ಕೃಕೈಉ 2019, ಬೆಂಗಳೂರು ದಿನಾಂಕ:05.07.2019.

2. ಸರ್ಕಾರದ ಆದೇಶ ಸಂ: ಕೃಇ 34 ಕೃಕೈಉ 2019(1), ಬೆಂಗಳೂರು ದಿನಾಂಕ:05.07.2019.

******

ಪ್ರಸ್ತಾವನೆ :

ಮೇಲೆ ಓದಲಾದ ಕ್ರ.ಸಂ:1 ರ ಸರ್ಕಾರದ ಆದೇಶದಲ್ಲಿ ರಾಜ್ಯದಲ್ಲಿ 2019–20ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಕಾರ್ಯವನ್ನು ಕೃಷಿ ಇಲಾಖೆ ವತಿಯಿಂದ ಸಿಆಸು (ಇ–ಆಡಳಿತ) ಇಲಾಖೆ ಸಹಾಯೋಗದೊಂದಿಗೆ ಮೊಬೈಲ್ ಆಪ್ ಮುಖಾಂತರ ಕೈಗೊಳ್ಳಲು ಸರ್ಕಾರವು ಅನುಮತಿ ನೀಡಿರುತ್ತದೆ.

ಮೇಲೆ ಓದಲಾದ ಕ್ರ.ಸಂ:2 ರ ಸರ್ಕಾರದ ಆದೇಶದಲ್ಲಿ ರಾಜ್ಯದಲ್ಲಿ ಬೆಳೆ ಸಮೀಕ್ಷೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಸಲುವಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಮತ್ತು ಇ–ಆಡಳಿತ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಸಹ–ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಉಸ್ತುವಾರಿ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ. ಸದರಿ ಉಸ್ತುವಾರಿ ಸಮಿತಿಗೆ ಅವಶ್ಯ ಮಾಹಿತಿಯನ್ನು ಒದಗಿಸಲು ಹಾಗೂ ಕಾಲಕಾಲಕ್ಕೆ ಕಾರ್ಯಕ್ರಮದ ಮೇಲ್ವಿಚಾರಣೆ ನಡೆಸಲು ಉಪ ಸಮಿತಿಯೊಂದನ್ನು ರಚಿಸಬೇಕಾಗಿರುವುದನ್ನು ಮನಗಂಡು ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 34 ಕೃಕೈಉ 2019 (2), ಬೆಂಗಳೂರು. ದಿನಾಂಕ:05.07.2019.**

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಬೆಳೆ ಸಮೀಕ್ಷೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಸಲುವಾಗಿ ಹಾಗೂ ಕಾರ್ಯಕ್ರಮದ ಮೇಲ್ವಿಚಾರಣೆ ನಡೆಸುವ ಸಂಬಂಧ ಈ ಕೆಳಕಂಡ ರಾಜ್ಯ ಮಟ್ಟದ ಉಪ ಸಮಿತಿಯನ್ನು ರಚಿಸಿ ಸರ್ಕಾರವು ಆದೇಶಿಸಿದೆ.

| ಕ್ರಸಂ. | ಹುದ್ದೆ ಮತ್ತು ಪದನಾಮ | ವಿವರ |
|---|---|---|
| 1. | ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ | ಅಧ್ಯಕ್ಷರು |
| 2. | ಆಯುಕ್ತರು, ಕೃಷಿ ಇಲಾಖೆ | ಸದಸ್ಯರು |
| 3. | ಆಯುಕ್ತರು/ನಿರ್ದೇಶಕರು ತೋಟಗಾರಿಕೆ ಇಲಾಖೆ | ಸದಸ್ಯರು |
| 4. | ಆಯುಕ್ತರು ರೇಷ್ಮೆ ಇಲಾಖೆ | ಸದಸ್ಯರು |
| 5. | ನಿರ್ದೇಶಕರು ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, | ಸದಸ್ಯರು |
| 6. | ನಿರ್ದೇಶಕರು, ಕೃಷಿ ಇಲಾಖೆ | ಸದಸ್ಯ ಕಾರ್ಯದರ್ಶಿ |

ಸದರಿ ಉಪ ಸಮಿತಿಯು ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಬೆಳೆ ಸಮೀಕ್ಷೆ ಕಾರ್ಯಕ್ರಮದ ಪರಿಶೀಲನೆಯನ್ನು ಆಗಿಂದಾಗ್ಗೆ ನಡೆಸಿ ಅಗತ್ಯ ಸೂಚನೆಗಳನ್ನು ನೀಡುತ್ತದೆ ಹಾಗೂ ರಾಜ್ಯ ಮಟ್ಟದ ಉನ್ನತ ಸಮಿತಿಗೆ ಅವಶ್ಯ ಮಾಹಿತಿಯನ್ನು ಒದಗಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್.ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

05/07/19

**ಇವರಿಗೆ:–**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು–01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿ.ಆಸು.ಇ(ಇ–ಆಡಳಿತ), ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬೆಂಗಳೂರು.
8. ಕೃಷಿ ಆಯುಕ್ತರು,/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
9. ಆಯುಕ್ತರು,/ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು.
10. ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬೆಂಗಳೂರು.
11. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
12. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
13. ನಿರ್ದೇಶಕರು, TNMC, ಖನಿಜ ಭವನ ಬೆಂಗಳೂರು.
14. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
15. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ– 4&5), ಆರ್ಥಿಕ ಇಲಾಖೆ, ಬೆಂಗಳೂರು
16. ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
17. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.